2. ಪ್ರಮುಖ ಪ್ರವಾಸಿ ಸ್ಥಳಗಳ ವೀಕ್ಷಣೆ.
3. ಸಾಂಸ್ಕೃತಿಕ ಕಾರ್ಯಕ್ರಮಗಳು.

ಇ. ಭಾರತ ಸರ್ಕಾರವು ಅನುಮೋದಿಸಿದ ನಂತರ.

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧ.

552 (1334 – ಎ): ಶ್ರೀ ಜಿ. ಪುಟ್ಟಸ್ವಾಮಿಗೌಡ (ಹೊಳೆನರಸೀಪುರ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ಸರ್ಕಾರವು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನವನ್ನು ನಿಷೇಧಿಸಿರುವುದೇ ?

ಆ. ಹಾಗಿದ್ದಲ್ಲಿ ವಿಧಾನಸೌಧ ಹಾಗೂ ಮತ್ತಿತರ ಸರ್ಕಾರಿ ಕಛೇರಿಗಳಲ್ಲಿ ಧೂಮಪಾನ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದೇ ?

ಇ. ಇದುವರೆಗೆ ದಾಖಲೆ ಮಾಡಿರುವ ಪ್ರಕರಣಗಳ ಸಂಖ್ಯೆ ಎಷ್ಟು ?

ಈ. ಎಲ್ಲ ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧಿಸಲು ಏನು ಕ್ರಮ ಜರುಗಿಸಲಾಗುವುದು ?

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು):–

ಅ. ರಾಜ್ಯಾದ್ಯಂತ ಸರ್ಕಾರಿ ಕಛೇರಿಗಳಲ್ಲಿ ಹಾಗೂ ಸರ್ಕಾರದ ನಿಯಂತ್ರಣದಲ್ಲಿ ಇರುವ ಸಾರ್ವಜನಿಕ ಸಂಸ್ಥೆಗಳ ಆವರಣದಲ್ಲಿ ಒಳಗೆ ಧೂಮಪಾನ ಮತ್ತು ಉಗುಳುವುದನ್ನು ನಿಷೇಧಿಸಿ ಕರ್ನಾಟಕ ಪೋಲೀಸ್ ಕಾಯಿದೆ 1963ರ ಸೆಕ್ಷನ್ 92ರ ಉಪ ಸೆಕ್ಷನ್ (1)ರ ಕ್ಲಾಜ್ (ವೈ)ನ ಕೲಂಗಳನ್ನು ವಿಸ್ತರಿಸಿ ದಿನಾಂಕ 8.1.93ರಂದು ಆದೇಶ ಹೊರಡಿಸಿದೆ.

ಆ. ಇಲ್ಲ.

ಇ. ಈ ಬಗ್ಗೆ ಇತ್ತೀಚೆಗಷ್ಟೇ ಆದೇಶಗಳನ್ನು ಹೊರಡಿಸಿರುವುದರಿಂದ ಉಲ್ಲಂಘನೆಯ ವಿರುದ್ಧ ಇನ್ನು ಮುಂದೆ ಪ್ರಕರಣಗಳನ್ನು ದಾಖಲಿಸಲು ಕ್ರಮ ಜರುಗಿಸಲಾಗುವುದು.

ಈ. ಇದನ್ನು ಪರಿಶೀಲಿಸಲಾಗುವುದು.

ಕನ್ನಡ ಆಡಳಿತ ಭಾಷೆಯನ್ನಾಗಿ ಮಾಡಲು ಸರ್ಕಾರದವರು ಕೈಕೊಂಡ ಕ್ರಮಗಳು.

554 (992): ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ)

ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ. ರಾಜ್ಯದಲ್ಲಿ ಹೊಸ ಸರ್ಕಾರದವರು ಬಂದ ನಂತರ ಕನ್ನಡವನ್ನು ಆಡಳಿತ ಭಾಷೆಯನ್ನಾಗಿ ಮಾಡಲು ಯಾವ ಯಾವ ಕ್ರಮವನ್ನು ಕೈಗೊಂಡಿರುವರು ?

ಆ. ರಾಜ್ಯದಲ್ಲಿ ಇನ್ನೂವರೆಗೂ ಪ್ರತಿಯೊಂದೂ ಇಲಾಖೆಗಳಲ್ಲಿ ಇಂಗ್ಲೀಷ್‌ನಲ್ಲಿಯೇ ಪತ್ರವ್ಯವಹಾರ ನಡೆಯುತ್ತಿದೆ ಎಂಬ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ. ಸರ್ಕಾರದವರು ಅಂಥ ಇಲಾಖೆಗಳವರ ಮೇಲೆ ಯಾವ ಕ್ರಮ ಕೈಗೊಂಡಿರುವರು ಹಾಗೂ ಇಂಗ್ಲೀಷ್‌ನಲ್ಲಿಯೇ ಪತ್ರವ್ಯವಹಾರ ಮಾಡುತ್ತಿರುವ ಇಲಾಖೆಗಳು ಯಾವುವು ?